ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ: 17ನೇ ಜುಲೈ, 2019

ಕೊಡಗು ಜಿಲ್ಲೆಯ ಪ್ರವಾಹ ಪೀಡಿತ ಪ್ರದೇಶದ ಪುನರ್ವಸತಿಯಲ್ಲಿನ ಗೊಂದಲದ ಬಗ್ಗೆ

ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

265 (317) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಒಂದು ವರ್ಷದ ಹಿಂದೆ ಕೊಡಗು ಜಿಲ್ಲೆಯ ಪ್ರವಾಹ ಪೀಡಿತ ಪ್ರದೇಶದಲ್ಲಿ ಪುನರ್ವಸತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಪ್ರವಾಹ ಪೀಡಿತ ಪ್ರದೇಶಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಅನುದಾನ ಹಾಗೂ ವಿವಿಧ ಸಾರ್ವಜನಿಕ, ಖಾಸಗಿ ಸಂಸ್ಥೆಗಳು ನೀಡಿರುವ ದೇಣಿಗೆಯ ವಿವರಗಳನ್ನು ಪ್ರತ್ಯೇಕವಾಗಿ ಒದಗಿಸುವುದು;

(ಇ) ಜಿಲ್ಲೆಯಲ್ಲಿ ಪ್ರವಾಹಕ್ಕೆ ತುತ್ತಾಗಿ ಮನೆಗಳನ್ನು ಕಳೆದುಕೊಂಡವರ ಸಂಖ್ಯೆ ಎಷ್ಟು ; ಇಲ್ಲಿಯವರೆಗೆ ಮನೆಗಳನ್ನು ಕಳೆದುಕೊಂಡ ಸಂತ್ರಸ್ಥರಿಗೆ ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ ಹಾಗೂ ಇಲ್ಲಿಯವರೆಗೆ ಎಷ್ಟು ಮನೆಗಳನ್ನು ಹಂಚಿಕೆ ಮಾಡಿ ಹಸ್ತಾಂತರಿಸಲಾಗಿದೆ ;

(ಈ) ನಿವೇಶನವನ್ನು ಕಳೆದುಕೊಂಡವರಿಗೆ ನಿವೇಶನಗಳನ್ನು ನೀಡಲು ಎಷ್ಟು ಜಾಗವನ್ನು ಕಾಯ್ದಿರಿಸಲಾಗಿದೆ ಹಾಗೂ ಎಷ್ಟು ನಿವೇಶನಗಳನ್ನು ನೀಡಲಾಗುವುದು ; ಇಲ್ಲಿಯವರೆವಿಗೆ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಿ ನೀಡಲಾಗಿದೆ ? (ವಿವರ ನೀಡುವುದು)